**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಜಿ.ಚಂದ್ರಶೇಖರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹಾಲಿ ನಿವೃತ್ತ) ಬಸವನಾಳ್ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14(ಎ) ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ **D.O.No.Compt/ Uplok/ BD-1829 /2017 /DRE-1,** ದಿನಾಂಕ:17.08.2021.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:17.08.2021 ರ ಅರೆ ಸರ್ಕಾರಿ ಪತ್ರದಲ್ಲಿ ಶ್ರೀ ಡಿ.ಆರ್. ಮಂಜುನಾಥ ತಂದೆ ಸಿದ್ದಪ್ಪ, ರಾಂಪುರ, ಕೊಂಡಜ್ಜಿ ಅಂಚೆ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ದೂರಿನಲ್ಲಿ ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ, ಬಸವನಾಳ್ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಜಿ. ಚಂದ್ರಶೇಖರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ವಿರುದ್ಧ ಈ ಕೆಳಕಂಡ ಆರೋಪಗಳ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ಶ್ರೀ ಜಿ. ಚಂದ್ರಶೇಖರಪ್ಪ, ಪಿ.ಡಿ.ಒ (ಹಾಲಿ ನಿವೃತ್ತ) ಬಸವನಾಳ್ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ 2) ಶ್ರೀ ಆರ್.ಜಿ. ಸುರೇಶ್ ಕುಮಾರ್, ಖಾಸಗಿ ವ್ಯಕ್ತಿ 3) ಶ್ರೀ ಡಿ.ಪಿ. ಸತೀಶ್, ಹಿರಿಯ ಉಪ ನೊಂದಣಾದಿಕಾರಿಗಳು, ದಾವಣಗೆರೆ ಜಿಲ್ಲೆ ಇವರು ಬಸವನಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಂಪುರ ಗ್ರಾಮದ ಗ್ರಾಮ ಠಾಣ ವ್ಯಾಪ್ತಿಗೆ ಸೇರದಿದ್ದರೂ ಹಾಗೂ ಪಂಚಾಯಿತಿಯಲ್ಲಿ ರಾಂಪುರ ಗ್ರಾಮ ಪಂಚಾಯಿತಿ ಪುಸ್ತಕದಲ್ಲಿ ಖಾತೆ ಇಲ್ಲದಿದ್ದರೂ ಸೃಷ್ಠಿ ಮಾಡಿ ನೊಂದಣಿ ಮಾಡಲು ಶ್ರೀ ಆರ್.ಜಿ. ಸುರೇಶ್ ಕುಮಾರ್ ಇವರಿಗೆ ಆಸ್ತಿ ಮಾರಾಟ ಮಾಡಲು ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿ, ಫಾರಂ ನಂ.10, 12 ಮತ್ತು ನಕ್ಷೆಯನ್ನು ಕೊಡುವಾಗ ದಾಖಲೆಗಳಲ್ಲಿ ಗ್ರಾಮದ ಹೆಸರಿಗೆ ಬರೆದಿರುವುದಿಲ್ಲ ಅದರೂ ಖಾಸಗಿ ವ್ಯಕ್ತಿಗೆ ಗ್ರಾಮ ಠಾಣ ವ್ಯಾಪ್ತಿಯಲ್ಲಿ ಆಸ್ತಿ ಇಲ್ಲದಿದ್ದರೂ ನಕಲಿ, ದಾಖಲೆ ಮಾಡಿ ಮಾರಾಟ ಮಾಡಲು ಕಾರಣರಾಗಿದ್ದಾರೆ ಎನ್ನಲಾದ ಆರೋಪಗಳ ಬಗ್ಗೆ.

ಈ ನಿವೃತ್ತ ನೌಕರರ ಮೇಲಿನ ಆಪಾದನೆಗಳ ಬಗ್ಗೆ ಹೆಚ್ಚಿನ/ಸಮಗ್ರ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 214 (2)(ಬಿ)(i) ರನ್ವಯ ವಹಿಸಬೇಕೆಂದು ಮಾನ್ಯ ಉಪ ಲೋಕಾಯುಕ್ತ ರವರು ಕೋರಿರುತ್ತಾರೆ.

ಮೇಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ನಿವೃತ್ತ ನೌಕರರು ಗ್ರಾಮ ಪಂಚಾಯಿತಿ ಪುಸ್ತಕದಲ್ಲಿ ಖಾತೆ ಇಲ್ಲದಿದ್ದರೂ ಸಹ ಖಾತೆ ಸೃಷ್ಟಿ ಮಾಡಿ ಸುಳ್ಳು ದಾಖಲೆಗಳನ್ನು ಆಸ್ತಿ ನೊಂದಾಣೆ ಮಾಡುವ ಸಲುವಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಕರ್ತವ್ಯ ಲೋಪವೆಸಗಿದ್ದಾರೆ ಎನ್ನಲಾದ ಆಪಾದನೆಗಳು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಸವನಾಳ್ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಕಾರ್ಯನಿರ್ವಾಹಕ ಅಧಿಕಾರಿ, ದಾವಣಗೆರೆ ತಾಲ್ಲೂಕು ಪಂಚಾಯತ್ ರವರುಗಳಿಗೆ ಬರೆದ

ದಿನಾಂಕ:03.07.2018, 20.08.2020ರ ಪತ್ರಗಳ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ದಾವಣಗೆರೆ ರವರು ದಿನಾಂಕ:14.12.2020ರಂದು ಮಾನ್ಯ ಲೋಕಾಯುಕ್ತ ಕಛೇರಿಗೆ ಬರೆದ ಪತ್ರಗಳ ಮೂಲಕ ಆರೋಪ ಸಾಬೀತಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ ಶ್ರೀ ಜಿ.ಚಂದ್ರಶೇಖರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹಾಲಿ ನಿವೃತ್ತ) ಬಸವನಾಳ್ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ನಿವೃತ್ತ ನೌಕರರು ಬಸವನಾಳ್ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಎಸಗಿದ್ದಾರೆ ಎನ್ನಲಾದ ಆಪಾದನೆಗಳ ಕುರಿತಂತೆ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ ೧೪ಎ ರಡಿಯಲ್ಲಿ ನಿಗಧಿಪಡಿಸಿರುವ ವಿಧಾನವನ್ನು ಅನುಸರಿಸಿ, ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 214 (2)(ಬಿ)(i) ರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ನಿರ್ಧರಿಸಿ, ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/129/ಗ್ರಾಪಂಕಾ/2021, ಬೆಂಗಳೂರು, ದಿನಾಂಕ:28.02.2022.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿ.ಚಂದ್ರಶೇಖರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹಾಲಿ ನಿವೃತ್ತ) ಬಸವನಾಳ್ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 214 (2)(ಬಿ)(i) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಂ.ಎಂ. 28/2/22

**(ರಾಜು.ಎಂ.ಎಂ)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ,</u>

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. <u>(ಪುಟ 1 ರಿಂದ 42 ರವರೆಗೆ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).</u>
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ದಾವಣಗೆರೆ, ದಾವಣಗೆರೆ ಜಿಲ್ಲೆ.
6. ಶ್ರೀ ಜಿ.ಚಂದ್ರಶೇಖರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹಾಲಿ ನಿವೃತ್ತ) ಬಸವನಾಳ್ ಗ್ರಾಮ ಪಂಚಾಯಿತಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

********